ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನ ಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 2/6/2020

# ವಿಶ್ವದ ಮನ ಗೆದ್ದ ವೀರ

2/6/20

**ಸಂ.ಕ ಸಮಾಚಾರ ಬೆಂಗಳೂರು**

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಆರು ವರ್ಷದ ಆಡಳಿತದ ಅವಧಿಯಲ್ಲಿ ಇಡೀ ಜಗತ್ತೇ ಭಾರತದತ್ತ ತಿರುಗಿ ನೋಡುವಂತೆ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಬಣ್ಣಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ 'ನರೇಂದ್ರಮೋದಿ ದೇಶ ಕಟ್ಟುವ ಕಾಯಕಕ್ಕೆ ತಮ್ಮನ್ನು ಅರ್ಪಿಸಿಕೊಂಡಿದ್ದಾರೆ. ತುಕ್ಕು ಹಿಡಿದಿದ್ದ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ ತಂದಿದ್ದಾರೆ. ಕೊರೊನಾ ಹಿನ್ನೆಲೆಯಲ್ಲಿ ಕೈಗೊಂಡ ಕ್ರಮಗಳಿಂದಾಗಿ ಜಗತ್ತಿನ ಇತರೆ ದೇಶಗಳೆಲ್ಲವೂ ಭಾರತವನ್ನು ಹಾಡಿ ಹೊಗಳುತ್ತಿವೆ. ಇದೇ ಸಂದರ್ಭದಲ್ಲಿ ಶ್ರಮಿಕರಿಗೆ ಪರಿಹಾರ. ರೈತರಿಗೆ ಮಾಸಾಶನ, ಆರ್ಥಿಕ ಪರಿಸ್ಥಿತಿ ಚೇತರಿಕೆಗೆ 20 ಲಕ್ಷ ಕೋಟಿ ರೂ ಪ್ಯಾಕೇಜ್ ನೀಡುವ ಮೂಲಕ ಗಮನ ಸೆಳೆದಿದ್ದಾರೆ ಎಂದರು.



ಭ್ರಷ್ಟಾಚಾರಕ್ಕೆ ಕಡಿವಾಣ, ಕರ್ತವ್ಯ ನಿಷ್ಠೆ, ತಂತ್ರಜ್ಞಾನ, ಪಾರದರ್ಶಕತೆ, ಜನಧನ್, ಆಯುಷ್ಮಾನ್ ಭಾರತ್, ಜನರಿಕ್ ಔಷಧಿ, ಬೇವು ಮಿಶ್ರಿತ ರಸಗೊಬ್ಬರ, ಮುದ್ರಾ, ಸ್ಟಾರ್ಟ್ ಅಪ್ ಇಂಡಿಯಾ ಸೇರಿ ಹಲವಾರು ಕಾರ್ಯಕ್ರಮ ರೂಪಿಸಿದ್ದಾರೆ. ಮುಸ್ಲಿಂ ಹೆಣ್ಣುಮಕ್ಕಳ ಶೋಷಣೆಗೆ ಕಾರಣವಾಗಿದ್ದ ತ್ರಿವಳಿ ತಲಾಖ್ ರದ್ದು, ಉಗ್ರರ ನಿಗ್ರಹ, ಬ್ಯಾಂಕುಗಳ ವಿಲೀನ, ಮಕ್ಕಳ ದೌರ್ಜನ್ಯಕ್ಕೆ ಕಠಿಣ ಕಾನೂನು, ಜಮ್ಮು–ಕಾಶ್ಮೀರ ವಿಭಜನೆ ಜೊತೆಗೆ ಆರ್ಟಿಕಲ್ 371 ರದ್ದು ನೊದಲಾದ ದಿಟ್ಟ ಕ್ರಮಗಳನ್ನು ಕೈಗೊಂಡಿದ್ದಾರೆ ಎಂದರು. ವಿದೇಶದಲ್ಲಿನ ನಿರಾಶ್ರಿತರಿಗೆ ಸಿಎಎ ಮೂಲಕ ಅಭಯ,



ಮೋಟಾರು ವಾಹನ ಕಾಯ್ದೆ ತಿದ್ದುಪಡಿ, ರೈತಾಪಿ ವರ್ಗಕ್ಕೆ ಪ್ರೋತ್ಸಾಹ, ಜಲ ಜೀವನ್ ಮಿಷನ್, ಅಸಂಘಟಿತ ಕಾರ್ಮಿಕ ವಲಯಕ್ಕೆ ಪಿಂಚಣಿ ಮೊದಲಾದ ಕಾರ್ಯಕ್ರಮ ಜಾರಿಗೊಳಿಸಿದ್ದಾರೆ. ನರೇಂದ್ರ ಮೋದಿ ಅಲೆ ಹಿನ್ನೆಲೆಯಲ್ಲೇ ಬಿಜೆಪಿಯು ಲೋಕಸಭೆಯಲ್ಲಿ ಅತ್ಯಧಿಕ ಸ್ಥಾನಗಳನ್ನು ಗೆಲ್ಲುವಂತಾಯಿತು ಎಂದು ಹೇಳಿದರು.